# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1112

ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 25-02-2022

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕೃಷಿ ಇಲಾಖೆಯಡಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳಾವುವು; (ವಿವರ ನೀಡುವುದು) | ಕೃಷಿ ಇಲಾಖೆ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಡಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳ ವಿವರಗಳನ್ನು ಕ್ರಮವಾಗಿ ಅನುಬಂಧ-1 ಮತ್ತು 2 ರಲ್ಲಿ ಒದಗಿಸಲಾಗಿದೆ.<br><br>Schemes and their details of Agriculture Department and Watershed Development Department are provided in Annexure-1& 2 respectively. |
| ಆ) | ಮುಂದಿನ ದಿನಗಳಲ್ಲಿ ಕೃಷಿ ಇಲಾಖೆಯಡಿಯಲ್ಲಿ ಯಾವುದಾದರೂ ನೂತನ ಯೋಜನೆಗಳನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು; | ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಘೋಷಣೆಯನ್ವಯ ನೂತನ ಯೋಜನೆಗಳನ್ನು ಜಾರಿಗೆ ತರಲಾಗುತ್ತದೆ.<br><br>New Scheme will be implemented as per announcements by Hon'ble Chief minister in Budget Speech. |
| ಇ) | ಕಳೆದ 5 ವರ್ಷಗಳಲ್ಲಿ ರಾಜ್ಯದ ಕೃಷಿ ವಲಯದ ಉತ್ಪಾದನೆಯ ಪ್ರಮಾಣದ ಪ್ರಗತಿಯ ವಿವರಗಳನ್ನು ನೀಡುವುದು; | ಕಳೆದ 5 ವರ್ಷಗಳಲ್ಲಿ ರಾಜ್ಯದ ಕೃಷಿ ವಲಯದ ಉತ್ಪಾದನೆಯ ಪ್ರಮಾಣದ ವಿವರ ಈ ಕೆಳಕಂಡಂತಿದೆ. |

(ಉತ್ಪಾದನೆ ಲಕ್ಷ ಟನ್ ಗಳಲ್ಲಿ)

| ವರ್ಗ/ವರ್ಷ | 2016-17 | 2017-18 | 2018-19 | 2019-20 | 2020-21 |
|---|---|---|---|---|---|
| ಆಹಾರ ಧಾನ್ಯಗಳು | 99.99 | 141.72 | 110.46 | 136.41 | 160.27 |
| ಎಣ್ಣೆ ಕಾಳುಗಳು | 8.05 | 12.79 | 7.92 | 10.41 | 12.49 |
| ಹತ್ತಿ* | 10.24 | 18.44 | 14.00 | 23.29 | 23.17 |
| ಕಬ್ಬು | 273.78 | 374.61 | 424.11 | 360.34 | 423.17 |
| ತಂಬಾಕು | 0.65 | 0.89 | 0.52 | 0.83 | 0.59 |
| *ಉತ್ಪಾದನೆ 170 kg ಲಕ್ಷ ಬೇಲ್ ಗಳಲ್ಲಿ . | | | | | |

Production of Agricultural Crops for the past 5 years is as follows:

(Production in Lakh tonnes)

| Category/years | 2016-17 | 2017-18 | 2018-19 | 2019-20 | 2020-21 |
|---|---|---|---|---|---|
| Food Crops | 99.99 | 141.72 | 110.46 | 136.41 | 160.27 |
| Oilseeds | 8.05 | 12.79 | 7.92 | 10.41 | 12.49 |
| Cotton* | 10.24 | 18.44 | 14.00 | 23.29 | 23.17 |
| Sugarcane | 273.78 | 374.61 | 424.11 | 360.34 | 423.17 |
| Tobacco | 0.65 | 0.89 | 0.52 | 0.83 | 0.59 |
| *Production in lakh bales of 170kg | | | | | |

| | | |
|---|---|---|
| ಈ) | ರೈತರಿಗೆ ಕೃಷಿಯನ್ನು ಒಂದು ಲಾಭದಾಯಕ ಹುದ್ದೆಯನ್ನಾಗಿ ಮಾಡುವ ಸರ್ಕಾರದ ಕಾರ್ಯಕ್ರಮಗಳಾವುವು; (ವಿವರ ನೀಡುವುದು) | ರೈತರಿಗೆ ಕೃಷಿಯನ್ನು ಒಂದು ಲಾಭದಾಯಕ ಹುದ್ದೆಯನ್ನಾಗಿ ಮಾಡುವ ಸರ್ಕಾರದ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-3ರಲ್ಲಿ ಒದಗಿಸಲಾಗಿದೆ.<br><br>Details of Government Schemes to make Agriculture as profitable venture, is provided in annexure-3 |

ಸಂಖ್ಯೆ: AGRI-AML/57/2022

(ಬಿ.ಸಿ. ಪಾಟೀಲ್)

ಕೃಷಿ ಸಚಿವರು

# ವಿಧಾನ ಪರಿಷತ್ತಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1112ಕ್ಕೆ ಅನುಬಂಧ-1

## ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಮತ್ತು ಅವುಗಳ ವಿವರಗಳು (2021-22)

**I. ರಾಜ್ಯ ವಲಯ ಯೋಜನೆಗಳು:**

1. **ಕೃಷಿ ಆಯುಕ್ತಾಲಯ(2401-00-001-1-01):** ಅಧಿಕಾರಿ/ ಸಿಬ್ಬಂದಿಗಳ/ ಹೊರಗುತ್ತಿಗೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ಹಾಗೂ ಬಾಡಿಗೆ ಆಧಾರದ ಮೇಲೆ ವಾಹನಗಳ ಬಳಕೆ, ಗಣಕ ಯಂತ್ರಗಳು, ಬಿಡಿಭಾಗಗಳು, ಕೆ-ಕಿಸಾನ್ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆ ವೆಚ್ಚಗಳು, ಇಲಾಖೆಯ ಅಧಿಕಾರಿಗಳಿಗೆ Close User Group (CUG) mobile connectivity ಒದಗಿಸುವುದು, ದೂರವಾಣಿ ವೆಚ್ಚಗಳು , ಕೇಂದ್ರ ಕಚೇರಿಯ ವಿವಿಧ ವಿಭಾಗಗಳ ದುರಸ್ತಿ ಹಾಗೂ ಅತ್ಯಗತ್ಯ ಕಟ್ಟಡ ಕಾಮಗಾರಿಗಳ ನಿರ್ವಹಣೆ.

2. **ಅನುಸೂಚಿತ ಜಾತಿಗಳ ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (2401-00-001-1-75):** ಈ ಯೋಜನೆಯಡಿ ಅನುದಾನವನ್ನು 2021-22ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ಸಹಾಯಧನದಡಿ ನೀಡಲು ಬಳಸಿಕೊಳ್ಳಲಾಗುವುದು.

3. ರೈತರ ಪ್ರೋತ್ಸಾಹ ಮತ್ತು ಬೆಂಬಲ ಯೋಜನೆಗಳು(2401-00-102-0-28)

   **ಅ) ಸಮಿತಿ ಮತ್ತು ಸಲಹೆಗಳು:** ಕೃಷಿ ಇಲಾಖೆಯು ಏರ್ಪಡಿಸುವ ಕಾರ್ಯಾಗಾರಗಳು, ಆಂದೋಲನಗಳು, ಸಮಿತಿಗಳ ಸಭೆಗಳು, ಇತ್ಯಾದಿಗಳ ಕಾರ್ಯ ನಿರ್ವಹಣೆಯು ಸುಲಲಿತವಾಗುವ ಸಲುವಾಗಿ ಅವುಗಳ ವೆಚ್ಚಗಳನ್ನು ಭರಿಸುವುದು ಹಾಗೂ ಸಭೆಗಳಿಗೆ ಕಾಫಿ/ಟೀ/ ಲಘು ಉಪಹಾರ ವೆಚ್ಚಗಳನ್ನು ಭರಿಸುವುದು.

   **ಆ) ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:** ರೈತರಲ್ಲಿ ಹೆಚ್ಚಿನ ಉತ್ಪಾದನೆ ಮಾಡುವ ಮನೋಭಾವ ಉಂಟು ಮಾಡಲು ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಬೆಳೆ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನಗಳನ್ನು ನೀಡಲಾಗುತ್ತದೆ. ಕೃಷಿ ಕ್ಷೇತ್ರದಲ್ಲಿ ಅಮೂಲ್ಯ ಅನ್ವೇಷಣೆ ಹಾಗೂ ಸೃಜನಾತ್ಮಕ ಕಾರ್ಯಗಳನ್ನು ಕೈಗೊಂಡ ರೈತರನ್ನು ಗುರುತಿಸಿ ಅವರುಗಳಿಗೆ ಪ್ರಶಸ್ತಿ ನೀಡಲಾಗುತ್ತಿದೆ. ಈ ಸಂಬಂಧ ತಗಲುವ ಎಲ್ಲಾ ವೆಚ್ಚಗಳನ್ನು ಭರಿಸಲಾಗುತ್ತದೆ (ಸಮಾರಂಭ ಆಯೋಜನೆ ಇತ್ಯಾದಿ.)

   **ಇ) ಬೆಳೆ ಸಾಲಕ್ಕೆ ಸಹಾಯಧನ:** ರಾಜ್ಯದ ರೈತರಿಗೆ ನೀಡಿದ ಬೆಳೆ ಸಾಲ/ ಅಲ್ಪಾವಧಿ ಸಾಲಕ್ಕೆ ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡಿದ ರೈತರಿಗೆ ಶೇ.1ರ ಬಡ್ಡಿ ರಿಯಾಯಿತಿ ನೀಡಲು (ಸರ್ಕಾರಿ ಸ್ವಾಮ್ಯದ ವಾಣಿಜ್ಯ ಬ್ಯಾಂಕುಗಳು ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ ಗರಿಷ್ಠ 1.00 ಲಕ್ಷ ಮಿತಿಯೊಳಗೆ) ಬಳಸಿಕೊಳ್ಳಲಾಗುವುದು.

   **ಈ) ಕೃಷಿ ಬಂಡವಾಳ ಹೂಡಿಕೆ ನಿಧಿ:** ಆಹಾರ ಸಂಸ್ಕರಣಾ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ, ಆಹಾರ ಸಂಸ್ಕರಣಾ ತಾಂತ್ರಿಕತೆಗಳ ತರಬೇತಿ ಕಾರ್ಯಾಗಾರ, ವಿಚಾರ ಸಂಕಿರಣ, ವಾಣಿಜ್ಯ ಮೇಳದಲ್ಲಿ ಭಾಗವಹಿಸುವುದು, ರೋಡ್ ಷೋ ಏರ್ಪಡಿಸುವುದು ಮುಂತಾದ ಉತ್ತೇಜನ ಕಾರ್ಯಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ಕೃಷಿ ವಾಣಿಜ್ಯ ನಿಗಮದ

ಆಡಳಿತಾತ್ಮಕ ವೆಚ್ಚ ಭರಿಸಲಾಗುವುದು. ಈ ಕಾರ್ಯಕ್ರಮಕ್ಕೆ ರೂ.0.50ಕೋಟಿ ಅನುದಾನವನ್ನು ಒದಗಿಸಲಾಗಿದೆ.

**ಉ. ಕೃಷಿ ಬೆಲೆ ಆಯೋಗ:** ಕೃಷಿ ಬೆಲೆ ಆಯೋಗದ ಅಧ್ಯಕ್ಷರ ಮತ್ತು ಇತರೆ ಸಿಬ್ಬಂದಿಯವರ ವೇತನ, ಇಂಧನ ಮತ್ತಿತರೆ ನಿರ್ವಹಣಾ ವೆಚ್ಚಗಳು, ರಾಜ್ಯದ 5 ಕೃಷಿ/ತೋಟಗಾರಿಕೆ ವಿಶ್ವವಿದ್ಯಾಲಯಗಳ ಸಹಯೋಗದಲ್ಲಿ ಬೆಳೆ ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆ ಮಾಹಿತಿ ಅಧ್ಯಯನ, ಬೆಳೆ ಉತ್ಪಾದನೆ, ಬೆಲೆ ಮುನ್ಸೂಚನೆ ತಂತ್ರಾಂಶ ಅಭಿವೃದ್ಧಿ, ಬೆಲೆ ನೀತಿ ಇತ್ಯಾದಿಗಳ ಬಗ್ಗೆ ಅಧ್ಯಯನ, ಆಮದು- ರಫ್ತು ನೀತಿ ಅಧ್ಯಯನ ಸಾಲ ನೀತಿ ಕುರಿತು ಅಧ್ಯಯನ ಕೈಗೊಳ್ಳಲಾಗುವುದು.

4. **ಬೀಜ ಕ್ಷೇತ್ರಗಳು(2401-00-103-0-01) :** ಬೀಜೋತ್ಪಾದನೆಗೆ ಅಗತ್ಯವಾದ ಎಲ್ಲಾ ಸಾಗುವಳಿ ಖರ್ಚುಗಳನ್ನು ನಿರ್ವಹಿಸುವುದು. ಸಿಬ್ಬಂದಿ ವೇತನ ಮತ್ತು ಭತ್ಯೆಗಳನ್ನು ಭರಿಸುವುದು ಹಾಗೂ ಅಗತ್ಯ ಕಚೇರಿ ವೆಚ್ಚಗಳನ್ನು ನಿರ್ವಹಿಸುವುದು. ಬೀಜ ಪರೀಕ್ಷಾ ಪ್ರಯೋಗಾಲಯಗಳು ಮತ್ತು ಬೀಜ ಪರೀಕ್ಷೆಗೆ ಅಗತ್ಯವಾದ ಎಲ್ಲಾ ಖರ್ಚುಗಳನ್ನು ನಿರ್ವಹಿಸುವುದು.

5. **ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ (2401-00-103-0-15):**

**ಅ) ವೇತನ ಹಾಗೂ ಪ್ರಯೋಗಶಾಲೆ ವೆಚ್ಚಗಳು:** ವಿವಿಧ ಪ್ರಯೋಗಾಲಯಗಳಲ್ಲಿ ಮಾದರಿಗಳ ವಿಶ್ಲೇಷಣೆಗೆ ತಗಲುವ ವೆಚ್ಚ ಹಾಗೂ ಇತರೆ ಖರ್ಚುಗಳ ಪಾವತಿ, ರಸಗೊಬ್ಬರ, ಪೀಡೆನಾಶಕಗಳು, ಜೈವಿಕ ಗೊಬ್ಬರಗಳು, ಜೈವಿಕ ಪೀಡೆನಾಶಕಗಳ ಗುಣನಿಯಂತ್ರಣಕ್ಕಾಗಿ ವೆಚ್ಚವನ್ನು ಭರಿಸಲಾಗುವುದು.

**ಆ) ಮಣ್ಣು ಆರೋಗ್ಯ ಅಭಿಯಾನ:** ಮಣ್ಣು ಮಾದರಿಗಳ ವಿಶ್ಲೇಷಣೆಗಾಗಿ ಮಣ್ಣು ಆರೋಗ್ಯ ಚೀಟಿ ಯೋಜನೆಯ ಘಟಕಗಳ ಅನುಷ್ಠಾನ, ಹೊರಗುತ್ತಿಗೆ ಆಧಾರದಲ್ಲಿ ತೆಗೆದುಕೊಂಡಿರುವ ಸಿಬ್ಬಂದಿಗಳಿಗೆ ವೇತನ ಪಾವತಿಗಾಗಿ ಮತ್ತು GIS-GPS ಸೇವೆಗಳನ್ನು ಪಡೆಯಲು, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಗೆ ಅನುದಾನ, ಕೇಂದ್ರಗಳ ವಿದ್ಯುತ್, ನೀರು ಬಾಡಿಗೆ ವೆಚ್ಚ, ತೆರಿಗೆ ಪರಿಕರಗಳ ಖರೀದಿ, ಸ್ಥಾನಿಕ ಮಣ್ಣು ಆರೋಗ್ಯ ಕೇಂದ್ರಗಳ ಕಾಮಗಾರಿ, ರಿಪೇರಿ ಮತ್ತು ನವೀಕರಣಕ್ಕಾಗಿ ಉಪಯೋಗಿಸಿಕೊಳ್ಳಲಾಗುವುದು.

**ಇ) ಬೀಜಗಳ ಪೂರೈಕೆ:** ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು.

**ಈ) ಬೀಜ ಹಾನಿ ನಿಧಿ ಮತ್ತು KSSC, KSSOCA & ತೊಗರಿ ಅಭಿವೃದ್ಧಿ ಮಂಡಳಿಗೆ ಸಹಾಯಾನುದಾನ:** ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಮತ್ತು ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ವಿತರಣೆಯಾಗಿ ಉಳಿದ ಬಿತ್ತನೆ ಬೀಜಗಳನ್ನು ಬೀಜೇತರವಾಗಿ ವಿಲೇವಾರಿ ಮಾಡಿ ವ್ಯತ್ಯಾಸದ ಹಣದ ಪಾವತಿಗೆ ವೆಚ್ಚ ಭರಿಸಲಾಗುವುದು.

**ಉ) ಸಸ್ಯ ಸಂರಕ್ಷಣೆ:** ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಗುಣ ನಿಯಂತ್ರಣ, ಬೀಜೋಪಚಾರ ಆಂದೋಲನ

ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುವುದು.

**ಊ) ರಾಸಾಯನಿಕ ಗೊಬ್ಬರದ ಮೇಲಿನ ಬಡ್ಡಿ ಸಹಾಯಧನ:** ರಸಗೊಬ್ಬರಗಳ ಕಾಪು ದಾಸ್ತಾನಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ ಮುಂಗಡ ಹಣ ನೀಡಲು ಮತ್ತು ರಸಗೊಬ್ಬರ ಖರೀದಿಯ ಸಾಲಕ್ಕೆ ಬಡ್ಡಿ, ಸಂಗ್ರಹಣಾ ವೆಚ್ಚ ಹಾಗೂ ರಸಗೊಬ್ಬರ ಸಾಗಾಣಿಕಾ ವೆಚ್ಚವನ್ನು ಭರಿಸಲಾಗುವುದು.

**ಋ) ಮಣ್ಣಿನ ಸತ್ವ ಹೆಚ್ಚಿಸುವಿಕೆ:** ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆಯನ್ನು ಹೆಚ್ಚಿಸಲು ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬೀಜ, ಜಿಪ್ಸಂ, ಕೃಷಿ ಸುಣ್ಣ, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಾವಯವ ಗೊಬ್ಬರಗಳು ಇತ್ಯಾದಿಗಳ ವಿತರಣೆ ಹಾಗೂ ಎರೆಹುಳು ಗೊಬ್ಬರ ಮತ್ತು ಸಾವಯವ ಗೊಬ್ಬರಗಳ ಉತ್ಪಾದನೆಗೆ ಪ್ರೋತ್ಸಾಹಧನ (ಬಯೋಡೈಜೆಸ್ಟರ್ ಘಟಕ ಸ್ಥಾಪನೆ, ಎರೆಹುಳು ಗೊಬ್ಬರ ಉತ್ಪಾದನಾ ಘಟಕಗಳಿಗೆ ಪ್ರೋತ್ಸಾಹಧನ) ನೀಡಲಾಗುವುದು.

**ಎ) ಸಾವಯವ ಇಂಗಾಲ ಹೆಚ್ಚಿಸುವಿಕೆ:** ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸಲು ಹಸಿರೆಲೆ ಗೊಬ್ಬರ ಬೀಜಗಳನ್ನು ರಿಯಾಯತಿ ದರದಲ್ಲಿ ವಿತರಣೆ ಮತ್ತು ಬಳಕೆ ಮಾಡುವ ರೈತರಿಗೆ ನೇರ ನಗದು ಸೌಲಭ್ಯ ವರ್ಗಾವಣೆ ಮೂಲಕ(Direct Benefit Transfer) ಬ್ಯಾಂಕ್ ಖಾತೆಗೆ ಪ್ರೋತ್ಸಾಹಧನ ಜಮೆ ಮಾಡಲಾಗುವುದು. ಇದಲ್ಲದೆ, ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಕೈಗೊಂಡು ಅದರ ಮಹತ್ವವನ್ನು ರೈತರಿಗೆ ತಿಳಿಯಪಡಿಸಲಾಗುವುದು.

**ಏ)ಕೃಷಿ ಸಂಸ್ಕರಣೆ:** ಕೃಷಿ ಸಂಸ್ಕರಣಾ ಘಟಕಗಳು, ಸಣ್ಣ ಯಂತ್ರ ಚಾಲಿತ ಎಣ್ಣೆಗಾಣಗಳು ಮತ್ತು ಟಾರ್ಪಾಲಿನ್ ಗಳನ್ನು ಸಹಾಯಧನದಡಿ ವಿತರಣೆ ಮಾಡಲಾಗುವುದು.

**ಐ) ಕೃಷಿ ಯಂತ್ರಧಾರೆ:** ರಾಜ್ಯದಲ್ಲಿಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗುವುದು.

**6.ಕೃಷಿ ಕ್ಷೇತ್ರ ಮತ್ತು ಕೃಷಿ ಅಭಿವೃದ್ಧಿ ಕೇಂದ್ರಗಳು (2401-00-104-0-10):** ಕೃಷಿ ಕ್ಷೇತ್ರ ಮತ್ತು ಕೃಷಿ ಅಭಿವೃದ್ಧಿ ಕೇಂದ್ರಗಳ ಎಲ್ಲಾ ಸಾಗುವಳಿ ವೆಚ್ಚವನ್ನು ನಿರ್ವಹಿಸುವುದು, ಸಿಬ್ಬಂದಿ ವೇತನ ಮತ್ತು ಭತ್ಯೆಗಳನ್ನು ಭರಿಸುವುದು ಮತ್ತು ಅಗತ್ಯ ಕಚೇರಿ ವೆಚ್ಚಗಳನ್ನು ನಿರ್ವಹಿಸುವುದು.

**7. ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮ:**

**ಅ) ಸಾವಯವ ಕೃಷಿ ಪ್ರಮಾಣೀಕರಣ:** ರಾಜ್ಯದ ಪ್ರಮಾಣಿತ ಸಾವಯವ ಕೃಷಿ ಪ್ರದೇಶದ ವಿಸ್ತೀರ್ಣವನ್ನು ಹೆಚ್ಚಿಸುವ ಸಲುವಾಗಿ ಆಯ್ದ ವೈಕ್ತಿಗತ/ ಗುಂಪು ಪ್ರಸ್ತಾವನೆಗಳ ಪ್ರದೇಶವನ್ನು ಸಾವಯವ ಪ್ರಮಾಣೀಕರಣವನ್ನು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನಾ ಸಂಸ್ಥೆ ಮೂಲಕ ಕೈಗೊಳ್ಳಲಾಗುವುದು.

**ಆ) ರೈತ ಸಿರಿ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

**ಇ) ಶೂನ್ಯ ಬಂಡವಾಳ ನೈಸರ್ಗಿಕ ಕೃಷಿ:** ಶೂನ್ಯ ಬಂಡವಾಳ ಕೃಷಿ ಉತ್ಪಾದನಾ ಪದ್ಧತಿಯನ್ನು ಕೃಷಿ ವಿಶ್ವವಿದ್ಯಾನಿಲಯಗಳ ಮೂಲಕ ವೈಜ್ಞಾನಿಕವಾಗಿ ಮೌಲ್ಯೀಕರಿಸಲು ಅನುದಾನವನ್ನು ಕಲ್ಪಿಸಲಾಗಿದೆ.

**ಈ) ಸಾವಯವ ಕೃಷಿ ಆಡಳಿತಾತ್ಮಕ ಮತ್ತು ಉತ್ತೇಜನ ಕಾರ್ಯಕ್ರಮಗಳು: :** ರಾಜ್ಯ ಮಟ್ಟದ ಸಾವಯವ ಕೃಷಿ ಉನ್ನತ ಮಟ್ಟದ ಸಮಿತಿಯ ಆಡಳಿತಾತ್ಮಕ ಮತ್ತು ಸಾವಯವ ಕೃಷಿ ಉತ್ತೇಜನ ಕಾರ್ಯಕ್ರಮಗಳಿಗೆ ಅನುದಾನ.

**8.ಕೃಷಿ ವಿಸ್ತರಣೆ ಮತ್ತು ತರಬೇತಿ (2401-00-109-0-21):**

**ಅ) ವೇತನ ಹಾಗೂ ಇತರೆ ವೆಚ್ಚಗಳು:** ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ವೇತನ, ಹೊರಗುತ್ತಿಗೆ ಸಿಬ್ಬಂದಿಯ ವೇತನ ಹಾಗೂ ಅಗತ್ಯ ಕಚೇರಿ ವೆಚ್ಚಗಳನ್ನು ನಿರ್ವಹಿಸುವುದು.

**ಆ) ರೈತ ಸಂಪರ್ಕ ಕೇಂದ್ರಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳ ನಿಯೋಜನೆ:** ರೈತ ಸಂಪರ್ಕ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಗೌರವಧನ ಪಾವತಿಸಲು ವೆಚ್ಚ ಭರಿಸಲಾಗುವುದು.

**ಇ) ರೈತ ಸಂಪರ್ಕ ಕೇಂದ್ರಗಳಿಗೆ ವಿದ್ಯಾರ್ಥಿಗಳ ನಿಯೋಜನೆ:** ಕೃಷಿ, ತೋಟಗಾರಿಕೆ ವಿಶ್ವವಿದ್ಯಾನಿಯಗಳಲ್ಲಿ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳನ್ನು ಕನಿಷ್ಠ ಪ್ರಾಯೋಗಿಕ ಕೌಶಲ್ಯ, ಕ್ಷೇತ್ರ ಅನುಭವ ಮತ್ತು ಜ್ಞಾನಕ್ಕಾಗಿ ರೈತ ಸಂಪರ್ಕ ಕೇಂದ್ರಗಳಿಗೆ ನಿಯೋಜಿಸಲಾಗುವುದು. ಇವರಿಗೆ ವಿದ್ಯಾರ್ಥಿ ವೇತನವನ್ನು ನೀಡಲು ಅನುದಾನವನ್ನು ವಿಶ್ವವಿದ್ಯಾಲಯಗಳಿಗೆ ನೀಡಲಾಗುವುದು.

**ಈ) ಕೃಷಿ ಅಭಿಯಾನ, ಮೇಳಗಳು ಮತ್ತು ವಸ್ತು ಪ್ರದರ್ಶನ:** ಕೃಷಿ ಅಭಿಯಾನದಡಿ ಹೋಬಳಿ ಮಟ್ಟದಲ್ಲಿ ಕೃಷಿ ಮತ್ತು ಸಂಬಂಧಿತ ಇಲಾಖೆಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾಹಿತಿಯನ್ನು ಏಕ ಗವಾಕ್ಷಿ ವಿಸ್ತರಣಾ ಪದ್ಧತಿಯಲ್ಲಿ ಪ್ರಚಾರ, ಕೃಷಿ ಜಾತ್ರೆ, ವಸ್ತು ಪ್ರದರ್ಶನಗಳ ಆಯೋಜನೆ ಮಾಡಲಾಗುವುದು.

**ಉ) ಕೃಷಿ ವಾರ್ತಾ ಘಟಕ:** ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕೃಷಿ ಸಂಬಂಧಿಸಿದ ವಿಸ್ತರಣಾ ಸಾಹಿತ್ಯಗಳು/ ಕೃಷಿ ಸಂಬಂಧಿತ ತಾಂತ್ರಿಕ ಪುಸ್ತಕ ಮುದ್ರಣ, ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳ ಮೂಲಕ ನೇರ ಫೋನ್-ಇನ್ ಕಾರ್ಯಕ್ರಮಗಳು, ವಿವಿಧ ಮಾಧ್ಯಮಗಳ ಮೂಲಕ ಜಾಹೀರಾತು/ ಪ್ರಕಟಣೆ ಮತ್ತು ಇನ್ನಿತರೆ ಪ್ರಚಾರ ಕಾರ್ಯಗಳನ್ನು ಸದರಿ ಯೋಜನೆಯಡಿ ಕೈಗೊಳ್ಳಲಾಗುವುದು.

**ಊ) ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುವುದು.

**ಋ) ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳ ನಿರ್ವಹಣೆ ಮತ್ತು ಉನ್ನತೀಕರಣ:** ಈ ಯೋಜನೆಯಡಿ ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳ ನಿರ್ವಹಣೆ ಮತ್ತು ಉನ್ನತೀಕರಣಕ್ಕಾಗಿ ಅನುದಾನವನ್ನು ಬಳಸಲಾಗುವುದು.

**ಎ) ಕೃಷಿಕ ಸಮಾಜ:** ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ವತಿಯಿಂದ ಕೈಗೊಳ್ಳುವ ತರಬೇತಿ, ವಿಚಾರ ಸಂಕಿರಣ, ರೈತರ ಅಧ್ಯಯನ, ಪ್ರವಾಸ ಕ್ಷೇತ್ರೋತ್ಸವ ಇತರ ವಿಚಾರ ಚಟುವಟಿಕೆಗಳಿಗೆ ಅನುದಾನ ಬಳಕೆ ಮಾಡಲಾಗುವುದು.

**9. ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುವುದು ಹಾಗೂ ಬೆಳೆ ಸಮೀಕ್ಷೆ ಕಾರ್ಯಕ್ಕೆ ಮತ್ತು ಬೆಳೆ ವಿಮೆ ಯೋಜನೆಗಳಿಗೆ ಸಂಬಂಧಿಸಿದಂತೆ ಅಗತ್ಯ ವೆಚ್ಚ ಭರಿಸಲಾಗುವುದು.

**10. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕ ರೂ.6000/-ಗಳ ನಗದನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ: 14-08-2019 ರಿಂದ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರೂ.4000/-ಗಳನ್ನು ಎರಡು ಕಂತುಗಳಲ್ಲಿ ಆರ್ಥಿಕ ನೆರವನ್ನು ಪಿ.ಎಂ.ಕಿಸಾನ್ ಕರ್ನಾಟಕ ಯೋಜನೆಯಡಿ ನೀಡಲಾಗುತ್ತಿದೆ.

**11. ಕೃಷಿ ಮಹಿಳೆಯರು ಮತ್ತು ಯುವಕ ರೈತರ ತರಬೇತಿ ಮತ್ತು ವಿಸ್ತರಣಾ ಕಾರ್ಯಕ್ರಮ (WYTEP) (2401-00-109-0-80):** ಸದರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ವೇತನ ಮತ್ತು ಇತರೆ ಭತ್ಯೆಗಳನ್ನು ಭರಿಸಲಾಗುತ್ತದೆ.

**12. ಖಾಲಿ ಹುದ್ದೆಗಳಿಗೆ ಅನುದಾನ (2401-00-800-1-70):** ಖಾಲಿ ಹುದ್ದೆಗಳು ಭರ್ತಿಯಾದಲ್ಲಿ ವೇತನ ನೀಡಲು ಅನುದಾನ ನಿಗದಿಪಡಿಸಲಾಗಿರುತ್ತದೆ.

**13.ಭೂಸಾರದ ಸಮೀಕ್ಷೆ ಮತ್ತು ಪರೀಕ್ಷೆ (2402-00-101-0-01) :** ಸದರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ವೇತನ ಮತ್ತು ಇತರೆ ಭತ್ಯೆಗಳನ್ನು ಭರಿಸಲಾಗುತ್ತದೆ.

**14.ಕೃಷಿ ಮೂಲಭೂತ ಸೌಕರ್ಯ (4401-00-001-1-01)**

**ಅ. ಬಂಡವಾಳ ವೆಚ್ಚಗಳು(ಪ್ರಮುಖ ಕಾಮಗಾರಿಗಳು):** ಲಭ್ಯವಿರುವ ನಿವೇಶನಗಳಲ್ಲಿ ಜಂಟಿ ಕೃಷಿ ನಿರ್ದೇಶಕರು, ಉಪ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳ ನೂತನ ಕಟ್ಟಡಗಳನ್ನು ನಿರ್ಮಿಸುವುದು, ಸ್ವಂತ ಕಟ್ಟಡ ಹೊಂದಿರುವ ರೈತ ಸಂಪರ್ಕ

ಕೇಂದ್ರಗಳ ಆವರಣದಲ್ಲಿ ಗೋದಾಮು ನಿರ್ಮಾಣ ಹಾಗೂ ಉಚಿತ ನಿವೇಶನಗಳು ಲಭ್ಯವಿಲ್ಲದ ಕಡೆ ಇಲಾಖೆಯ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ನಿವೇಶನಗಳ ಖರೀದಿಗೆ ಅನುದಾನವನ್ನು ಬಳಸಲಾಗುವುದು.

**ಆ. ರೈತ ಸಂಪರ್ಕ ಕೇಂದ್ರಗಳು:** ಆರ್.ಐ.ಡಿ.ಎಫ್ ಯೋಜನೆಯಡಿ ಅನುಮೋದನೆಯಾಗಿರುವ ರೈತ ಸಂಪರ್ಕ ಕೇಂದ್ರಗಳ ಕಟ್ಟಡಗಳ ನಿರ್ಮಾಣಕ್ಕೆ ಅನುದಾನವನ್ನು ಬಳಸಲಾಗುವುದು.

**15. ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ ಯೋಜನೆ (2202-08-107-0-06):** ರೈತರ ಮಕ್ಕಳು ಸ್ನಾತಕೋತ್ತರ ಶಿಕ್ಷಣದವರೆಗೆ ವಿದ್ಯಾಭ್ಯಾಸ ಪಡೆಯಲು ಪ್ರೋತ್ಸಾಹಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಕಾರ್ಯಕ್ರಮದಡಿ 8, 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣುಮಕ್ಕಳು ಮತ್ತು ಎಸ್.ಎಸ್.ಎಲ್.ಸಿ / 10ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ / ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳು ಈ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ವಿದ್ಯಾರ್ಥಿ ವೇತನವನ್ನು ವಾರ್ಷಿಕವಾಗಿ ಬ್ಯಾಂಕ್ ಖಾತೆಗಳಿಗೆ ನೇರನಗದು ವರ್ಗಾವಣೆ (Direct Benefit Transfer – DBT) ಪದ್ಧತಿಯ ಮೂಲಕ ವರ್ಗಾಯಿಸಲಾಗುವುದು.

## II. ಜಿಲ್ಲಾ ವಲಯ ಯೋಜನೆಗಳು

### 16. ಜಿಲ್ಲಾ ಪಂಚಾಯತ್ ಯೋಜನೆಗಳು:

**ಅ.ಸಿಬ್ಬಂದಿ (2435-00-101-0-27):** ಜಿಲ್ಲಾ ಪಂಚಾಯತ್ ಅಡಿ ಕಾರ್ಯ ನಿರ್ವಹಿಸುತ್ತಿರುವ ಕೃಷಿ ಇಲಾಖೆಯ ಅಧಿಕಾರಿ / ಸಿಬ್ಬಂದಿ ವೇತನ ಮತ್ತು ವೇತನೇತರ ವೆಚ್ಚಗಳನ್ನು ಭರಿಸಲಾಗುವುದು.

**ಆ. ಕೃಷಿ ಕಚೇರಿ ಕಟ್ಟಡಗಳು (2435-00-101-0-33):** ಜಿಲ್ಲೆಗಳಲ್ಲಿ ರೈತ ಸಂಪರ್ಕ ಕೇಂದ್ರ ಕಟ್ಟಡಗಳ ನಿರ್ಮಾಣ ಹಾಗೂ ಇಲಾಖಾ ಕಟ್ಟಡಗಳ ಆವರಣದಲ್ಲಿ ಗೋದಾಮುಗಳ ನಿರ್ಮಾಣ ಹಾಗೂ ಇಲಾಖಾ ಕಟ್ಟಡಗಳು, ವಸತಿ ಗೃಹಗಳ ನವೀಕರಣ/ ದುರಸ್ತಿ ಕಾಮಗಾರಿಗಳಿಗೆ ಬಳಸಲಾಗುವುದು.

**ಇ. ಕೃಷಿ ತರಬೇತಿ ಶಾಲೆಗಳು (2435-00-101-0-37):** ಕೃಷಿ ತರಬೇತಿ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿ ವೇತನ ಮತ್ತು ವೇತನೇತರ ವೆಚ್ಚಗಳನ್ನು ಭರಿಸಲಾಗುವುದು.

### 17. ತಾಲ್ಲೂಕು ಪಂಚಾಯತ್ ಯೋಜನೆಗಳು:

**ತಾಲ್ಲೂಕು ಸಿಬ್ಬಂದಿ (2435-00-101-0-61):** ಈ ಯೋಜನೆಯಲ್ಲಿ ತಾಲ್ಲೂಕು ಪಂಚಾಯತ್ ಅಡಿ ಕಾರ್ಯ ನಿರ್ವಹಿಸುತ್ತಿರುವ ಕೃಷಿ ಇಲಾಖೆಯ ಅಧಿಕಾರಿ / ಸಿಬ್ಬಂದಿ ವೇತನ ಮತ್ತು ವೇತನೇತರ ಅಂಶಗಳಿಗೆ ಅನುದಾನವನ್ನು ನೀಡಲಾಗುತ್ತದೆ.

## III. ಕೇಂದ್ರ ಪುರಸ್ಕೃತ ಯೋಜನೆಗಳು

**18. ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ(2401-00-102-0-08):** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬತ್ತ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು ಉತ್ಪಾದನೆಗೆ ಬಿತ್ತನೆ ಬೀಜ, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹಧನ ನೀಡಲಾಗುತ್ತದೆ..

**19. ಬೀಜ ಮತ್ತು ನೆಡುವಿಕೆ ವಸ್ತುಗಳ ಯೋಜನೆ(SMSP)(2401-00-103-0-22):** ಈ ಯೋಜನೆಯಡಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮೂಲಕ ರಾಜ್ಯ ಬೀಜೋತ್ಪಾದನಾ ಕೇಂದ್ರಗಳ ಬಲವರ್ಧನೆ, ಬೀಜ ಪ್ರಮಾಣನಾ ಸಂಸ್ಥೆಗಳಿಗೆ ಬೆಂಬಲ, ಬೀಜೋಪಚಾರ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈ ಯೋಜನೆಯನ್ನು ಸರ್ಕಾರಿ ಸ್ವಾಮ್ಯ ಸಂಸ್ಥೆಗಳು/ ರಾಜ್ಯ ಕೃಷಿ/ ತೋಟಗಾರಿಕೆ ವಿಶ್ವವಿದ್ಯಾಲಯಗಳಿಂದ ಅನುಷ್ಠಾನ ಗೊಳಿಸಲಾಗುವುದು.

**20. ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ(2401-00-108-1-15):** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಅವರು ಹೊಂದಿರುವ ಪ್ರದೇಶಕ್ಕೆ ಶೇ.90 ರಷ್ಟು ಹಾಗೂ ಇತರೆ ರೈತರಿಗೆ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

**21. ಕೃಷಿ ವಿಸ್ತರಣೆ ಉಪ ಅಭಿಯಾನ (2401-00-109-0-34):** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯ ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರ / ರೈತರ ತರಬೇತಿ, ಪರಿಚಯ ಪ್ರವಾಸ , ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

**22. ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM)-2401-00-113-0-02:** ಈ ಯೋಜನೆಯ ಉದ್ದೇಶ ಕೃಷಿ ಯಂತ್ರೋಪಕರಣಗಳ ಬಳಕೆಯಿಂದ ಸಾಗುವಳಿ ವಿಸ್ತೀರ್ಣದಲ್ಲಿ

ಯಾಂತ್ರೀಕೃತ ಶಕ್ತಿಯನ್ನು ಪ್ರತಿ ಹೆಕ್ಟೇರಿಗೆ 2.0ಕಿಲೋ ವ್ಯಾಟ್ ಗಳಷ್ಟು ಹೆಚ್ಚಿಸುವುದಾಗಿದೆ. ಇದರಡಿ ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ರೈತರಿಗೆ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ ನಾಟಿ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಶುಗರ್ ಕೇನ್ ಹಾರ್ವೆಸ್ಟರ್, ಕಂಬೈನ್ಡ್ ಹಾರ್ವೆಸ್ಟರ್, ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗಿರುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ಖರೀದಿಸಲು ರೈತರಿಗೆ ಹಣಕಾಸಿನ ನೆರವು ಮತ್ತು ಬಾಡಿಗೆ ಆಧಾರಿತ ಸೇವಾ ಕೇಂದ್ರಗಳಿಗೆ ಗ್ರಾಮ ಮಟ್ಟದ ಯಂತ್ರೋಪಕರಣಗಳ ಬ್ಯಾಂಕ್/ ಹೈಟೆಕ್ ಉಪಕರಣಗಳ ಹಬ್ ಗಾಗಿ ಹಣಕಾಸಿನ ನೆರವು ನೀಡಲಾಗುವುದು.

**23. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (2401-00-800-1-57):** ಈ ಯೋಜನೆಯಡಿ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಹೆಚ್ಚಿನ ಸಾರ್ವಜನಿಕ ಹೂಡಿಕೆಗಾಗಿ ರಾಜ್ಯಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಜಿಲ್ಲಾ ಕೃಷಿ ಯೋಜನೆಗಳಲ್ಲಿ ಸ್ಥಳೀಯ ಆದ್ಯತೆಗಳು/ ಅವಶ್ಯಕತೆಗಳು/ ಬೆಳೆಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು, ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಮುಖ್ಯ ಬೆಳೆಗಳ ಉತ್ಪಾದಕತೆಯಲ್ಲಿ ಇರುವ ವ್ಯತ್ಯಯದ ಪ್ರಮಾಣವನ್ನು ಕಡಿತಗೊಳಿಸಲು, ಕೃಷಿ ಮತ್ತು ಸಂಬಂಧಿತ ವಲಯಗಳ ಎಲ್ಲಾ ಅವಶ್ಯಕತೆಗಳನ್ನು ತೆಗೆದುಕೊಂಡು ಉತ್ಪಾದನೆ/ ಉತ್ಪಾದಕತೆಯ ವಿವಿಧ ಘಟಕಗಳಲ್ಲಿ ಬದಲಾವಣೆ ತರಲು ಮತ್ತು ರೈತರಿಗೆ ಹೆಚ್ಚಿನ ಲಾಭಾಂಶ ದೊರಕಿಸಿಕೊಡಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಈ ಸಂಬಂಧ, ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆ/ ಸಂಸ್ಥೆಗಳಿಂದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

**24. ಮಣ್ಣಿನ ಫಲವತ್ತತೆಯ ಯೋಜನೆ-2402-00-101-0-03:** ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಪ್ರತಿ ಹೆಕ್ಟೇರಿಗೆ ಗರಿಷ್ಠ ರೂ.2500/- ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಗ್ರಾಮ ಮಟ್ಟದ ಪರೀಕ್ಷಾ ಘಟಕಗಳನ್ನು ಸ್ಥಾಪಿಸಲು ಶೇ.75ರ ಸಹಾಯಧನ ನೀಡಲಾಗುತ್ತಿದೆ.

**25. ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ -2408-01-103-0-01:** ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳಿಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯದ ಪಾಲಿನ ಅನುದಾನವನ್ನು ಒದಗಿಸಲಾಗುವುದು. ಈ ಯೋಜನೆಯನ್ನು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ಅಭಿವೃದ್ಧಿ ನಿಗಮ (KAPPEC) ಮೂಲಕ ಅನುಷ್ಠಾನಗೊಳಿಸಲಾಗುತ್ತದೆ.

ಕೃಷಿ ನಿರ್ದೇಶಕರು

# ಅನುಬಂಧ - 2

## ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಪ್ರಸ್ತುತ ಜಾರಿಯಲ್ಲಿರುವ ಅಭಿವೃದ್ಧಿ ಯೋಜನೆಗಳ ವಿವರ

**(LCQ 1112):**

1) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (PMKSY): ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 60:40ರ ಅನುಪಾತದಲ್ಲಿ ಅನುದಾನ ಒದಗಿಸಲಾಗುತ್ತಿದೆ.

ಅ) **ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ (PMKSY-WDC):** ಈ ಯೋಜನೆ ಮೂಲಕ ಮಣ್ಣು ಮತ್ತು ನೀರು ಸಂರಕ್ಷಣೆಗಾಗಿ ಕಂದಕ ಬದುಗಳು, ಬೋಲ್ಡರ್/ರಬಲ್/ಸಸ್ಯತಡೆಗಳು, ಕೃಷಿ ಹೊಂಡಗಳು, ಚಿಕ್ಕ ತಡೆಅಣೆಗಳು, ನಾಲಾಬದುಗಳು, ಖುಷ್ಕಿ ತೋಟಗಾರಿಕೆ, ಕೃಷಿ ಅರಣ್ಯ ಮತ್ತು ಮೇವು ಅಭಿವೃದ್ಧಿ ಮುಂತಾದ ಚಟುವಟಿಕೆಗಳನ್ನು ತಾಂತ್ರಿಕತೆ ಆಧರಿಸಿ ಅನುಷ್ಠಾನ ಮಾಡಲಾಗುತ್ತದೆ. ಈ ಚಟುವಟಿಕೆಗಳಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆಯಾಗಿ ಬೆಳೆಗಳ ಉತ್ಪಾದಕತೆಯು ಹೆಚ್ಚಾಗುತ್ತದೆ.

ಯೋಜನಾ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಭೂ ರಹಿತ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಹಿಳೆಯರಿಗಾಗಿ ಸ್ವಸಹಾಯ ಗುಂಪುಗಳನ್ನು ರಚಿಸಲಾಗುತ್ತದೆ. ಸ್ವಸಹಾಯ ಗುಂಪಿನ ಸದಸ್ಯರಿಗೆ ಅಗತ್ಯ ತರಬೇತಿಗಳನ್ನು ನೀಡಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಸುತ್ತು ನಿಧಿಯನ್ನು ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ.

ಆ) **ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು(PMKSY-OI):** ಈ ಯೋಜನೆಯಡಿ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳಾದ ತಡೆಅಣೆ, ನಾಲಾಬದು, ಕಿಂಡಿ ಅಣೆ, ಜಿನುಗುಕೆರೆ ಮತ್ತಿತರ ನೀರು ಸಂಗ್ರಹಣಾ ವಿನ್ಯಾಸಗಳನ್ನು ರಚಿಸಿ, ಸದರಿ ವಿನ್ಯಾಸಗಳನ್ನು ಸೂಕ್ಷ್ಮ ನೀರಾವರಿಗೆ ಅಳವಡಿಸುವುದರ ಮೂಲಕ ಬೆಳೆಗಳ ಸಂದಿಗ್ಧ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿಗೆ ನೀರನ್ನು ಬಳಸಿ ಕೃಷಿ ಉತ್ಪನ್ನಗಳ ಉತ್ಪಾದನೆಯನ್ನು ಹೆಚ್ಚಿಸಲು ನೆರವಾಗುತ್ತದೆ.

2. **ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆಯಾಶ್ರಿತ ಪ್ರದೇಶಾಭಿವೃದ್ಧಿ ಕಾರ್ಯಕ್ರಮ (NMSA-RAD):** ಈ ಕಾರ್ಯಕ್ರಮವನ್ನು ಮಳೆಯಾಶ್ರಿತ ಪ್ರದೇಶಗಳಲ್ಲಿ ಕನಿಷ್ಠ 100 ಹೆಕ್ಟೇರ್ ಪ್ರದೇಶದಲ್ಲಿ ಆಯ್ದ ಗುಚ್ಛ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಸಮಗ್ರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಲಾಗುತ್ತಿದೆ. ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಕೃಷಿ ಅರಣ್ಯ ಆಧಾರಿತ ಮಿಶ್ರ ಬೆಳೆ ಪದ್ಧತಿಗಳನ್ನು ಒಬ್ಬ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶ ಮೀರದಂತೆ ಅನುಷ್ಠಾನಗೊಳಿಸಲಾಗುತ್ತಿದೆ. ಇದರೊಂದಿಗೆ ಮೌಲ್ಯವರ್ಧಿತ ಚಟುವಟಿಕೆಗಳಾದ ಜೇನು ಸಾಕಾಣಿಕೆ, ಸೈಲೇಜ್ ಗುಂಡಿ, ಸಮುದಾಯ ಕೆರೆ, ನೀರು ಎತ್ತುವ ಯಂತ್ರಗಳು, ಎರೆಹುಳು ಸಾಕಾಣಿಕೆ, ನೀರು ಸಂರಕ್ಷಣಾ ಕಾಮಗಾರಿಗಳಾದ ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಇತರೆ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು. ಈ ಎಲ್ಲಾ ಚಟುವಟಿಕೆಗಳಿಂದ ರೈತನ ಆದಾಯದಲ್ಲಿ ಸುಸ್ಥಿರತೆ ತರಲು ಸಾಧ್ಯವಾಗುತ್ತದೆ.

3. ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ (WDPD): 2019-20ನೇ ಸಾಲಿನಿಂದ ರಾಜ್ಯದ 100 ಬರಪೀಡಿತ ಮತ್ತು ಅಂತರ್ಜಲ ಶೋಷಿತ ತಾಲ್ಲೂಕುಗಳಲ್ಲಿ ಭೂಸಂಪನ್ಮೂಲ ಸಮೀಕ್ಷೆ ಮಾಹಿತಿ ಆಧರಿಸಿ ಹಾಗೂ MGNREGA ಮತ್ತು PMKSY ಯೋಜನೆಗಳೊಂದಿಗೆ ಒಗ್ಗೂಡಿಸಿ ಬರನಿರೋಧಕ ಜಲಾನಯನ ಚಟುವಟಿಕೆಗಳ ಅನುಷ್ಠಾನದ ಮೂಲಕ ಮಳೆಯಾಶ್ರಿತ ಜಲಾನಯನ ಪ್ರದೇಶದ

ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಆಸ್ತಿರಹಿತರಿಗೆ ಜೀವನೋಪಾಯ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ನೆರವು ನೀಡಲು ಸಹಾಯವಾಗುವುದು.

4.**ಸುಜಲ-III ನಿರ್ಗಮನ ಕಾರ್ಯಕ್ರಮ (Exit Strategy):** ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (ಸುಜಲ-III) (ಬಾಹ್ಯ ನೆರವು) ಯೋಜನೆಯು ಮುಕ್ತಾಯಗೊಂಡಿದ್ದು, ಯೋಜನಾ ನಂತರದ ಅವಧಿಯಲ್ಲಿ 2020-21ನೇ ಸಾಲಿನಿಂದ 2024-25ನೇ ಸಾಲಿನವರೆಗೆ (ಡಿಸೆಂಬರ್ 2024ರ ವರೆಗೆ) ಸುಜಲ-III ನಿರ್ಗಮನ (Exit Strategy) ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ರಾಜ್ಯ ಸರ್ಕಾರವು ಅನುಮೋದನೆ ನೀಡಿರುತ್ತದೆ.

ಸುಜಲ-III ಯೋಜನೆಯಡಿಯ ಭೂ-ಸಂಪನ್ಮೂಲ ದತ್ತಾಂಶ, ಡಿಜಿಟಲ್ ಗ್ರಂಥಾಲಯ, ಭೂ-ಸಂಪನ್ಮೂಲ ಪೋರ್ಟಲ್ ಹಾಗೂ ಮೊಬೈಲ್ ಅಪ್ಲಿಕೇಷನ್ ನವೀಕರಣ ಹಾಗೂ ನಿರ್ವಹಣೆ; ಪಾಲುದಾರ ಸಂಸ್ಥೆಗಳಿಗೆ ಒದಗಿಸಿರುವ ವೈಜ್ಞಾನಿಕ ಉಪಕರಣ, ಪ್ರಯೋಗಾಲಯ ಇತ್ಯಾದಿ ಸೌಲಭ್ಯಗಳ ನಿರ್ವಹಣೆ; ಸುಜಲ-III ಯೋಜನೆ ವ್ಯಾಪ್ತಿಯ ಗ್ರಾಮಗಳ ರೈತರಿಗೆ ಭೂ-ಸಂಪನ್ಮೂಲ ಮಾಹಿತಿ, ಡಿಜಿಟಲ್ ಗ್ರಂಥಾಲಯ ಮತ್ತು ಭೂ ಸಂಪನ್ಮೂಲ ಪೋರ್ಟಲ್ ಬಳಸುವ ಕುರಿತು ಅರಿವು ಮೂಡಿಸಲು ತರಬೇತಿಗಳನ್ನು ಆಯೋಜಿಸುವುದು ಹಾಗೂ ಭೂ ಸಂಪನ್ಮೂಲ ಕಾರ್ಡ್ ವಿತರಿಸುವುದು.

5. **ವಿಶ್ವಬ್ಯಾಂಕ್ ನೆರವಿನ Rejuvenating Watersheds for Agricultural Resilience through Innovative Development (REWARD) ಯೋಜನೆ:** (ರಾಜ್ಯದ ಪಾಲು - ಶೇ.30 ಹಾಗೂ ವಿಶ್ವ ಬ್ಯಾಂಕ್ ನೆರವು - ಶೇ.70)

ಸುಜಲ-III ಯೋಜನೆ ಮಾದರಿಯಲ್ಲಿ ವಿಶ್ವಬ್ಯಾಂಕ್ ಅನುದಾನದ ನೆರವಿನೊಂದಿಗೆ ಹೊಸ ಬಹು-ರಾಜ್ಯ ಜಲಾನಯನ ಯೋಜನೆ(REWARD)ಯನ್ನು ರಾಜ್ಯದ 21 ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲು ಉದ್ದೇಶಿಸಲಾಗಿದೆ.

ಈ ಯೋಜನೆಯಡಿ ಪ್ರಸ್ತಾಪಿಸಲಾದ ಪ್ರಮುಖ ಕಾರ್ಯಚಟುವಟಿಕೆಗಳು: ಅಂದಾಜು 19.41 ಲಕ್ಷ ಹೆ. ಮಳೆಯಾಶ್ರಿತ ಪ್ರದೇಶದಲ್ಲಿ ಭೂ ಸಂಪನ್ಮೂಲ ಸಮೀಕ್ಷೆ (Land Resource Inventory-LRI) ಕೈಗೊಳ್ಳುವುದು; ಅಂದಾಜು 1.0 ಲಕ್ಷ ಹೆ. ಪ್ರದೇಶದ (ಒಟ್ಟು 20 ಉಪಜಲಾನಯನಗಳಲ್ಲಿ) ಭೂ ಸಂಪನ್ಮೂಲ ಮಾಹಿತಿ ಆಧರಿಸಿ ವೈಜ್ಞಾನಿಕವಾಗಿ ಸಂಪೂರ್ಣ ಜಲಾನಯನದ ಉಪಚಾರವನ್ನು ಕೈಗೊಳ್ಳುವುದು; ರೈತ ಉತ್ಪಾದಕ ಸಂಸ್ಥೆಗಳ ಪ್ರವರ್ಧನೆ ಮತ್ತು ಮೌಲ್ಯ ಸರಪಳಿ ಅಭಿವೃದ್ಧಿ ಕಾರ್ಯಕ್ರಮ (FPOs and Value Chain Development); ರೈತರಿಗೆ ಸುಧಾರಿತ ಕೃಷಿ-ಹವಾಮಾನ ಸಲಹಾ ಸೇವೆ ಒದಗಿಸುವುದು; ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಸಂಸ್ಥೆ ಆವರಣದಲ್ಲಿ ಜಲಾನಯನ ನಿರ್ವಹಣೆ ಕುರಿತು ಅತ್ಯುನ್ನತ ಮಟ್ಟದ ಅಧ್ಯಯನ ಮತ್ತು ತರಬೇತಿ ಕೇಂದ್ರ (Centre of Excellence on Watershed Management) ಸ್ಥಾಪಿಸುವುದು; ಭೂ-ಸಂಪನ್ಮೂಲ ಮಾಹಿತಿಯನ್ನು ಡಿಜಿಟಲ್ ಗ್ರಂಥಾಲಯದಲ್ಲಿ ಸಂಗ್ರಹಿಸಿ ನಿರ್ಣಯ ಬೆಂಬಲ ವ್ಯವಸ್ಥೆ (DSS) ಮತ್ತು ಭೂ-ಸಂಪನ್ಮೂಲ ಪೋರ್ಟಲ್ ಬಲವರ್ಧನೆಗೊಳಿಸುವ ಮೂಲಕ ವೈಜ್ಞಾನಿಕವಾಗಿ ಕಿರುಜಲಾನಯನವಾರು ಜಲಾನಯನ ಅಭಿವೃದ್ಧಿ ಕ್ರಿಯಾಯೋಜನೆಗಳನ್ನು ತಯಾರಿಸಲು ಮತ್ತು ರೈತರಿಗೆ ಕ್ಷೇತ್ರ ಮಟ್ಟದಲ್ಲಿ ಸ್ಥಳ ನಿರ್ದಿಷ್ಟ ತಾಂತ್ರಿಕತೆಗಳ ಮಾಹಿತಿಯನ್ನು ಒದಗಿಸಲು ಉದ್ದೇಶಿಸಲಾಗಿರುತ್ತದೆ.

**6.10000 ರೈತ ಉತ್ಪಾದಕರ ಸಂಸ್ಥೆ(FPO)ಗಳ ರಚನೆ ಮತ್ತು ಉತ್ತೇಜನ(ಕೇಂದ್ರ ವಲಯ):** ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಘವು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ

ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸದಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

7. **ಅಮೃತ ರೈತ ಉತ್ಪಾದಕರ ಸಂಸ್ಥೆ(FPO)ಗಳ ಸ್ಥಾಪನೆ ಮತ್ತು ಪ್ರೋತ್ಸಾಹ:** ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಘವು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸದಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ. ಅಮೃತ ಉತ್ಪಾದಕರ ಸಂಸ್ಥೆಗಳನ್ನು ಜಲಾನಯನ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನೆ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಗಳಿಂದ ರಚಿಸಲಾಗುತ್ತಿದೆ.

*<u>ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದಿಂದ ಅನುಷ್ಠಾನ ಮಾಡುತ್ತಿರುವ ಯೋಜನೆಗಳು</u>*

8. <u>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:</u>

**ಅ) ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ(RPS):** ನಿರ್ದಿಷ್ಟ ಅಗತ್ಯತೆ ಮತ್ತು ಸ್ಥಳಕ್ಕನುಗುಣವಾಗಿ ಕೃಷಿ ಅಭಿವೃದ್ಧಿ, ವೈಜ್ಞಾನಿಕ ಇಂಜಿನಿಯರಿಂಗ್ ಕ್ರಮಗಳು, ವೈಜ್ಞಾನಿಕವಾಗಿ ರಸಗೊಬ್ಬರಗಳ ಬಳಕೆ, ಉಪ್ಪು ಸಹಿಷ್ಣ ಬೆಳೆ/ಕೃಷಿ ಅರಣ್ಯೀಕರಣ ಪದ್ಧತಿಗಳನ್ನು ಅಳವಡಿಸಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ/ಅಭಿವೃದ್ಧಿ ಮೂಲಕ ಬೆಳೆ ಇಳುವರಿ ಹೆಚ್ಚಿಸುವುದು.

**ಆ)ತಡೆಅಣೆ ನಿರ್ಮಾಣ ಕಾರ್ಯಕ್ರಮ (CD)** : ಈ ಕಾರ್ಯಕ್ರಮದಡಿ ಅನುಷ್ಠಾನ ಮಾಡಲಾಗುವ ತಡೆಅಣೆಗಳು ಜಲಾನಯನ ತತ್ವದ ಆಧಾರದ ಮೇಲೆ ವೈಜ್ಞಾನಿಕವಾಗಿ ಸೂಕ್ತವಾದ ಸ್ಥಳಗಳಲ್ಲಿ ನಿರ್ಮಾಣ ಮಾಡುವ ಸಮುದಾಯ/ವ್ಯಕ್ತಿಗತ ರಚನೆಗಳಾಗಿದ್ದು, ಜಿಲ್ಲಾ ನೀರಾವರಿ ಯೋಜನೆಯ ಭಾಗವಾಗಿರುತ್ತದೆ.

**ಇ) ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (PPP-IAD):** ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೃಷಿಯ ಉತ್ಪಾದನೆಯಿಂದ ಹಿಡಿದು ಬಳಕೆಯ ಹಂತದವರೆಗೂ ಸಂಪೂರ್ಣ ಮೌಲ್ಯವೃದ್ಧಿ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆ / ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಕೃಷಿಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಕೊಯ್ಲಿನೋತ್ತರ ನಷ್ಟವನ್ನು ಕಡಿಮೆಗೊಳಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಿಂದ ರೈತರಿಗೆ ನೇರ ಮಾರುಕಟ್ಟೆ ಬೆಂಬಲವನ್ನು ನೀಡುವುದರ ಮೂಲಕ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವುದಲ್ಲದೆ, ರೈತರು ಉತ್ಪಾದಿಸುವ ಬೆಳೆಗೆ ಸೂಕ್ತ ಬೆಲೆಯನ್ನು ದೊರಕಿಸಿಕೊಡಲು ಸಹಾಯವಾಗುವುದು.

**ಈ) ರೈತ ಉತ್ಪಾದಕರ ಸಂಸ್ಥೆ(FPO)ಗಳ ರಚನೆ:** ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಘವು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸದಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ

ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ. ಈ ಯೋಜನೆಯನ್ನು ರಾಜ್ಯ ವಲಯ ಯೋಜನೆಯೊಂದಿಗೆ ಒಗ್ಗೂಡಿಸುವುವಿಕೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.

ಆಯುಕ್ತರು, 22/2/22
ಜಲಾನಯನ ಅಭಿವೃದ್ಧಿ ಇಲಾಖೆ

## ವಿಧಾನ ಸಭೆ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 1112ಕ್ಕೆ ಅನುಬಂಧ-3

## ರೈತರಿಗೆ ಕೃಷಿಯನ್ನು ಒಂದು ಲಾಭದಾಯಕ ಹುದ್ದೆಯನ್ನಾಗಿ ಮಾಡುವ ಸರ್ಕಾರದ ಕಾರ್ಯಕ್ರಮಗಳು

1. **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು (ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90) ಸಣ್ಣ ಟ್ರ್ಯಾಕ್ಟರ್ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರುಗಳಿಗೆ ರೂ.3.00ಲಕ್ಷ ಸಹಾಯಧನ ನೀಡಲಾಗುವುದು. ಕೃಷಿ ಸಂಸ್ಕರಣೆ ಘಟಕಗಳು ಮತ್ತು ಟಾರ್ಪಾಲೀನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರ ಸಹಾಯಧನವನ್ನು ನೀಡಲಾಗುತ್ತಿದೆ.

2. **ಕೃಷಿ ಯಂತ್ರಧಾರೆ:** ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗಿರುತ್ತದೆ.

3. **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಅವರು ಹೊಂದಿರುವ ಪ್ರದೇಶಕ್ಕೆ ಶೇ.90 ರಷ್ಟು ಹಾಗೂ ಇತರೆ ರೈತರಿಗೆ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

4. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳಿಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡುವುದು ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ಅಭಿವೃದ್ಧಿ ನಿಗಮ (KAPPEC) ಮೂಲಕ ಅನುಷ್ಠಾನಗೊಳಿಸಲಾಗುತ್ತದೆ. ಈ ಯೋಜನೆಯ ಪ್ರಮುಖ ಅಂಶವು ಒಂದು ಜಿಲ್ಲೆಗೆ ಒಂದು ಉತ್ಪನ್ನವನ್ನು (One District One Product) ಗುರುತಿಸಿ ಉತ್ತೇಜಿಸುವುದು ಆಗಿರುತ್ತದೆ. ಈ ಬೆಳೆ / ಉತ್ಪನ್ನವನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯಲ್ಲಿರುವ ಅತಿ ಸಣ್ಣ ಉದ್ದಿಮೆಗಳಿಗೆ ಸಾಲ ಆಧಾರಿತ ನೆರವು ನೀಡುವುದು, ಮೂಲಭೂತ ಸೌಕರ್ಯ ಗಳನ್ನು ಸೃಜಿಸುವುದು, ಬ್ರ್ಯಾಂಡಿಗ್ ಮತ್ತು ಮಾರುಕಟ್ಟೆಗೆ ನೆರವು ನೀಡುವುದು ಈ ಮುಂತಾದ ಕಾರ್ಯಕ್ರಮಗಳಿಗೆ ಯೋಜನೆಯಡಿಯಲ್ಲಿ ನೆರವು ನೀಡಲು ಅವಕಾಶ ಕಲ್ಪಿಸಲಾಗಿದೆ.

5. **ಸೆಕಂಡರಿ ಕೃಷಿ ನಿರ್ದೇಶನಾಲಯ ಸ್ಥಾಪನೆ:** ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಪ್ರಾಣಿ ಜನ್ಯ ಉತ್ಪನ್ನಗಳ ಸಂಸ್ಕರಣೆ, ಗ್ರಾಮೀಣ ಮತ್ತು ಗುಡಿ ಕೈಗಾರಿಕೆಗಳ ಮೂಲಕ ರೈತರಿಗೆ ಹೆಚ್ಚಿನ ಆದಾಯ ತರಲು ಹಾಗೂ ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಉದ್ಯೋಗ ಸೃಜನೆಗೆ ಪೂರಕವಾಗಿ, ಕೃಷಿ ಉತ್ಪನ್ನಗಳಿಂದ ಉಪ ಉತ್ಪನ್ನಗಳ ತಯಾರಿಕೆಗೆ ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸಲು ಸುಸ್ಥಿರ ಹಾಗೂ ಕ್ರೋಡೀಕೃತ ವ್ಯವಸ್ಥೆಗಾಗಿ ಪ್ರತ್ಯೇಕ ರಾಜ್ಯ ಸೆಕಂಡರಿ ಕೃಷಿ ನಿರ್ದೇಶನಾಲಯವನ್ನು ಅಧಿಸೂಚಿಸಲಾಗಿರುತ್ತದೆ. ಇದರಡಿ ಉತ್ಪಾದಿತ ಬೆಳೆಗಳ ಮೌಲ್ಯವರ್ಧನೆ, ಪರ್ಯಾಯ ಉದ್ಯಮಗಳಿಗೆ ಉತ್ತೇಜನ ಮತ್ತು ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಪಶುಸಂಗೋಪನಾ ತ್ಯಾಜ್ಯಗಳ ಬಳಕೆಗೆ ಪ್ರೋತ್ಸಾಹ ನೀಡಲಾಗುವುದು.

ಕೃಷಿ ನಿರ್ದೇಶಕರು